## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮತ್ತು ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರುಗಳು ಸಾರ್ವಜನಿಕರ ನೌಕರರಾಗಿದ್ದು, ದುರ್ವರ್ತನೆಯಿಂದ ನಡೆದುಕೊಂಡಿರುವ ಬಗ್ಗೆ-ಆದೇಶ.

**ಓದಲಾಗಿದೆ:** ನಿಬಂಧಕರು ವಿಚಾರಣೆಗಳು-4 ಮಾನ್ಯ ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: Compt/Uplok/MYS-6155/2014/ DRE-4 ದಿನಾಂಕ: 06-12-2016.

**ಪ್ರಸ್ತಾವನೆ:**

ಈ ಪ್ರಕರಣದಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತ-2 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ ಪ್ರಕರಣ 12(4)ರ ಅಡಿಯಲ್ಲಿ ಸಲ್ಲಿಸಿರುವ ವರದಿಯಲ್ಲಿ, ಶ್ರೀ ಟಿ.ಎನ್.ಸ್ವಾಮಿ ಬಿನ್ ಬಿ. ನಾಗೇಶ್ ಮೂರ್ತಿ, ತಲಕಾಡು ಹೊಸ ಬೀದಿ, ಸರ್ಕಾರಿ ಪ್ರೌಢ ಶಾಲೆ ಮುಂಭಾಗ, ತಲಕಾಡು ಗ್ರಾಮ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರು ಈ ದೂರನ್ನು, ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಟಿ.ನರಸೀಪುರ ತಾಲ್ಲೂಕು, ತಲಕಾಡು ಗ್ರಾಮ ಪಂಚಾಯತ್ ರವರುಗಳ ವಿರುದ್ಧ ದಾಖಲಿಸಿ, ದೂರುದಾರರ ಮನೆಯ ಪಕ್ಕದಲ್ಲಿ ಶ್ರೀ ನಾಗ ಬಿನ್ ಕರಗಯ್ಯ ಎಂಬುವವರು ಗ್ರಾಮ ಪಂಚಾಯತಿ ವತಿಯಿಂದ ಯಾವುದೇ ಅನುಮತಿಯಾಗಲೀ ಅಥವಾ ಲೈಸೆನ್ಸ್ ಆಗಲೀ ಪಡೆಯದೇ ಅಕ್ರಮವಾಗಿ ಮಾಂಸದ ಅಂಗಡಿ, ಕೋಳಿ ಅಂಗಡಿ ಹಾಗೂ ಮೀನು ಅಂಗಡಿಯನ್ನು ನಡೆಸುತ್ತಿದ್ದಾರೆಂದು, ಅಕ್ರಮವಾಗಿ ನಡೆಸುತ್ತಿರುವ ಅಂಗಡಿಗಳನ್ನು ತೆರವುಗೊಳಿಸಲು ಎದುರುದಾರರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಆರೋಪಿಸಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9ರಡಿಯಲ್ಲಿ ಪ್ರದತ್ತವಿರುವ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

ಈ ಸಂಬಂಧ, ಕಂಡಿಕೆ 63ರ ಗೌರವಾನ್ವಿತ ಉಪಲೋಕಾಯುಕ್ತರ ಆದೇಶದ ಮೇರೆಗೆ, ದಿನಾಂಕ: 19/09/2013 ರಿಂದ 30/09/2014 ರವರೆಗೆ ಟಿ.ನರಸೀಪುರ ತಲ್ಲೂಕಿನ ತಲಕಾಡು ಗ್ರಾಮಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುವವರ ವಿವರ ಸಲ್ಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಟಿ.ನರಸೀಪುರ ತಾಲ್ಲೂಕು ರವರಿಗೆ ತಿಳಿಸಲಾಗಿ, ಸದರಿಯವರು (1) ಶ್ರೀ ಆರ್. ಲಿಂಗರಾಜು ರವರು ದಿನಾಂಕ: 19/09/2013 ರಿಂದ 19/01/2014 ರವರಗೆ ತಲಕಾಡು ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತಾರೆಂದು ಹಾಗೂ (2) ಶ್ರೀ ಆರ್. ಮಾದೇಶ್ ರವರು ದಿನಾಂಕ: 20/01/2014 ರಿಂದ 30/09/2014 ರವರೆಗೆ ತಲಕಾಡು ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುವುದಾಗಿ ತಿಳಿಸಿರುತ್ತಾರೆ.

ದೂರಿನಲ್ಲಿ ಇರುವ ಆಪಾದನೆಗಳು, ಎದುರುದಾರರ ಆಕ್ಷೇಪಣೆ ಹಾಗೂ ಪ್ರತ್ಯುತ್ತರವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ 1 ಮತ್ತು 2ನೇ ಎದುರುದಾರರುಗಳು ಈ ಕೆಳಕಂಡಂತೆ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ.

ದೂರುದಾರರ ದಿನಾಂಕ: 19/09/2013 ರಂದು ಎದುರುದಾರರ ಗ್ರಾಮ ಪಂಚಾಯಿತಿಗೆ, ಶ್ರೀ ನಾಗ ಬಿನ್ ಕರಗಯ್ಯ ರವರು ಅಕ್ರಮವಾಗಿ ಗ್ರಾಮ ಪಂಚಾಯಿತಿಯಿಂದ ಯಾವುದೇ ಲೈಸನ್ಸ್ ಅಥವಾ ಅನುಮತಿಯನ್ನು ಪಡೆಯದೇ ಮಾಂಸದ ಅಂಗಡಿ ಹಾಗೂ ಕೋಳಿ ಅಂಗಡಿಯನ್ನು ನಡೆಸುತ್ತಿದ್ದಾರೆಂದು ದೂರು ಸಲ್ಲಿಸಿರುತ್ತಾರೆ.

ಎದುರುದಾರರಾದ ಗ್ರಾಮ ಪಂಚಾಯಿತಿಯವರು ದೂರುದಾರರು ದೂರು ನೀಡಿದ ನಂತರ ಶ್ರೀ ನಾಗ ಬಿನ್ ಕರಗಯ್ಯ ರವರಿಗೆ ಅಕ್ರಮವಾಗಿ ನಡೆಸುತ್ತಿರುವ ಮಾಂಸದ ಅಂಗಡಿ ಹಾಗೂ ಕೋಳಿ ಅಂಗಡಿಯನ್ನು ತೆರವುಗೊಳಿಸುವಂತೆ ತಿಳಿಸಿ ದಿನಾಂಕ: 19/10/2013 ರಂದು ನೋಟೀಸ್ ನೀಡಿರುತ್ತಾರೆ.

ಎದುರುದಾರರು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಆಗಿದ್ದುಕೊಂಡು ಗ್ರಾಮದಲ್ಲಿ ಅಕ್ರಮವಾಗಿ ನಡೆಸುತ್ತಿರುವ ಅಂಗಡಿಗಳನ್ನು ದೂರುದಾರರು ದೂರು ನೀಡುವ ಮೊದಲೇ, ವೀಕ್ಷಿಸಿ, ಕ್ರಮ ವಹಿಸಬೇಕಾಗಿರುವುದು ಎದುರುದಾರರ ಆಧ್ಯ ಕರ್ತವ್ಯವಾಗಿರುತ್ತದೆ. ಆದರೆ, ಎದುರುದಾರರು ಒಬ್ಬ ಗ್ರಾಮದ ಜವಾಬ್ದಾರಿಯುತ ನೌಕರನಾಗಿದ್ದುಕೊಂಡು ಕರ್ತವ್ಯವನ್ನು ಪಾಲಿಸದೇ ಕರ್ತವ್ಯ ಲೋಪವೆಸಗಿರುತ್ತಾರೆ.

ದಿನಾಂಕ: 19/09/2013 ರಂದು ದೂರುದಾರರು ಎದುರುದಾರರು ಕರ್ತವ್ಯ ನಿರ್ವಹಿಸುವ ಗ್ರಾಮ ಪಂಚಾಯಿತಿಗೆ ದೂರು ಸಲ್ಲಿಸಿದ ಒಂದು ತಿಂಗಳ ನಂತರ ವಿಳಂಬ ಮಾಡಿ ಅಂದರೆ ದಿನಾಂಕ: 19/10/2013 ರಂದು ಶ್ರೀ ನಾಗ ಬಿನ್ ಕರಗಯ್ಯ ರವರಿಗೆ ಲೈಸನ್ಸ್ ಪಡೆಯದೇ ನಡೆಸುತ್ತಿರುವ ಮಾಂಸದ ಅಂಗಡಿ ಹಾಗೂ ಕೋಳಿ ಅಂಗಡಿಯನ್ನು ತೆರವುಗೊಳಿಸುವಂತೆ ತಿಳಿಸಿ ನೋಟೀಸ್ ನೀಡಿರುತ್ತಾರೆ.

ಎದುರುದಾರರು ದಿನಾಂಕ: 19/10/2013 ರಂದು ಶ್ರೀ ನಾಗ ಬಿನ್ ಕರಗಯ್ಯ ರವರಿಗೆ ಮಾಂಸದ ಅಂಗಡಿ ಹಾಗೂ ಕೋಳಿ ಅಂಗಡಿಗಳನ್ನು ತೆರವುಗೊಳಿಸುವಂತೆ ತಿಳಿಸಿ ನೋಟೀಸ್ ನೀಡಿದ್ದರೂ ಸಹಾ, ಎದುರುದಾರರನ್ನು ಸದರಿ ಅಕ್ರಮವಾಗಿ ನಡೆಸುತ್ತಿರುವ ಮಾಂಸದ ಅಂಗಡಿ ಹಾಗೂ ಕೋಳಿ ಅಂಗಡಿಯನ್ನು ತೆರವುಗೊಳಿಸಲು ಕ್ರಮ ಕೈಗೊಂಡಿರುವುದು 11 ತಿಂಗಳ ನಂತರ ಅಂದರೆ ದಿನಾಂಕ: 10/09/2014 ರಂದು.

ದೂರುದಾರರು ದೂರು, ಎದುರುದಾರರುಗಳ ಆಕ್ಷೇಪಣೆ, ಮತ್ತು ದೂರುದಾರರ ಪ್ರತ್ಯುತ್ತರ ಹಾಗೂ ಕಡತದಲ್ಲಿರುವ ದಾಖಲೆಗಳನ್ನು ಪರಿಶೀಲಿಸಿದಾಗ, ಮೇಲ್ನೋಟಕ್ಕೆ '1 ಮತ್ತು 2ನೇ ಎದುರುದಾರರುಗಳ' ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಸಂಬಂಧ ಮುಂದುವರಿಯುವುದು ಅಗತ್ಯ ಎಂದು ಕಂಡು ಬಂದಿದ್ದು, '1 ಮತ್ತು 2ನೇ ಎದುರುದಾರರುಗಳು' ಸರ್ಕಾರಿ/ಸಾರ್ವಜನಿಕ ಸೇವಕರಾಗಿದ್ದು ತಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಮತ್ತು ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ವೇದ್ಯವಾಗುತ್ತದೆ.

ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮತ್ತು ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರುಗಳು ಸಾರ್ವಜನಿಕ ಸರ್ಕಾರಿ ನೌಕರರಾಗಿದ್ದು, ಇವರ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ ಕರ್ತವ್ಯ ಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ ಸರ್ಕಾರಿ ನೌಕರರಾಗಿದ್ದು ದುರ್ವತನೆಯಿಂದ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ಆದ್ದರಿಂದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1) (ು) ಮತ್ತು (ು) ರನ್ವಯ ದುರ್ನತಡೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುವುದು ಕಂಡುಬಂದಿರುವುದರಿಂದ, ಇವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳು, 1957 ರ ನಿಯಮ 14-ಎ ರಡಿಯಲ್ಲಿ 1 ಮತ್ತು 2ನೇ ಎದುರುದಾರರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ವಹಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು-2, ಬೆಂಗಳೂರು ರವರ ವರದಿಯನ್ನು ಪರಿಶೀಲಿಸಿ, ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಮತ್ತು ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರುಗಳ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಇವರ ವಿರುದ್ಧ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರ ನಿಯಮ 14-ಎ ರನ್ವಯ ಮಾನ್ಯ ಉಪ ಲೋಕಾಯುಕ್ತರು-2, ರವರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/855/ಗ್ರಾಪಂಕಾ/2016**
**ಬೆಂಗಳೂರು, ದಿನಾಂಕ:30-03-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಮತ್ತು ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರುಗಳ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು-2, ರವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು,-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಮೂಲ ಪತ್ರಗಳನ್ನು, ಪುಟ ಸಂಖ್ಯೆ 01 ರಿಂದ 27 ರ ವರೆಗೆ ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಲಾಗಿದೆ)

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ –ಸದರಿ ಆದೇಶವನ್ನು ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಮತ್ತು ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರಿಗೆ ತುರ್ತಾಗಿ ಜಾರಿಗೊಳಿಸಿ ಕೊಡಲೇ ವರದಿ ಸಲ್ಲಿಸಬೇಕೆಂದು ಕೋರಲಾಗಿದೆ.

5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಟಿ. ನರಸೀಪುರ, ಮೈಸೂರು ಜಿಲ್ಲೆ.

6) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ, ಚಾಮರಾಜನಗರ ಜಿಲ್ಲೆ.

7) ಶ್ರೀ ಮಾದೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ತಲಕಾಡು ಗ್ರಾಮ ಪಂಚಾಯತ್ ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ

8) ಶ್ರೀ ಲಿಂಗರಾಜು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಲಕಾಡು ಗ್ರಾಮ ಪಂಚಾಯತಿ, ಟಿ. ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ (ಹಾಲಿ ಸಹಾಯಕ ನಿರ್ದೇಶಕರು ಗ್ರಾಮೀಣಾ ಉದ್ಯೋಗ) ತಾಲ್ಲೂಕು ಪಂಚಾಯತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ

~~9) ಗಣಕ ಕೋಶ~~

10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.